**All India Radio: Bangalore**
**National Bulletin In Kannada**
**15.10.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.10.2026  07.35 a.m.**

**<><><><>**

ಮುಖ್ಯಾಂಶಗಳು

1. ಏಷ್ಯನ್ ಗೇಮ್ಸ್‌ನಲ್ಲಿ ಭಾಗವಹಿಸಿದ್ದ ಭಾರತೀಯ ಕ್ರೀಡಾಪಟುಗಳ ಜೊತೆ ಪ್ರಧಾನಿ ನರೇಂದ್ರ ಮೋದಿ ಇಂದು ಸಂವಾದ
2. ಲಡಾಖ್‌ನಲ್ಲಿ ಇಂದು ೫ ಪ್ರಮುಖ ಯೋಜನೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಿರುವ ಪ್ರಧಾನಿ
3. ರೈಲ್ವೆ ನೌಕರರಿಗೆ ೭೮ ದಿನಗಳ ವೇತನಕ್ಕೆ ಸಮಾನವಾದ ಬೋನಸ್ ನೀಡಲು ಕೇಂದ್ರ ಸಚಿವ ಸಂಪುಟ ಸಭೆ ಅನುಮೋದನೆ
4. ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮಗಳ ಶಿಫಾರಸ್ಸಿಗೆ ಕೇಂದ್ರ ಸರ್ಕಾರದ ಸಮಿತಿ ರಚನೆ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿಂದು ಏಷ್ಯನ್ ಗೇಮ್ಸ್ -೨೦೨೬ರಲ್ಲಿ ಭಾಗವಹಿಸಿದ್ದ ಭಾರತೀಯ ಕ್ರೀಡಾಪಟುಗಳ ತಂಡದೊಂದಿಗೆ ಸಂವಾದ ನಡೆಸಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿಯವರು ಸಭೆಯನ್ನು ಉದ್ದೇಶಿಸಿ ಭಾಷಣವನ್ನೂ ಮಾಡಲಿದ್ದಾರೆ. ಜಪಾನ್‌ನ ಐಚಿ-ನಗೋಯಾದಲ್ಲಿ ನಡೆದ ಏಷ್ಯನ್ ಗೇಮ್ಸ್‌ನಲ್ಲಿ ಭಾರತ, ೨೧ ಚಿನ್ನ, ೨೭ ಬೆಳ್ಳಿ ಮತ್ತು ೩೭ ಕಂಚಿನ ಪದಕಗಳೊಂದಿಗೆ ಒಟ್ಟು ೮೫ ಪದಕಗಳನ್ನು ಗೆದ್ದು, ಪದಕ ಪಟ್ಟಿಯಲ್ಲಿ ನಾಲ್ಕನೇ ಸ್ಥಾನವನ್ನು ಪಡೆಯಿತು. ಏಷ್ಯನ್ ಗೇಮ್ಸ್‌ನಲ್ಲಿ ಸತತ ಎರಡನೇ ಬಾರಿಗೆ, ಅಗ್ರ ಐದು ರಾಷ್ಟ್ರಗಳ ಪೈಕಿ ಸ್ಥಾನ ಪಡೆಯುವ ಮೂಲಕ, ಭಾರತ ವಿವಿಧ ಕ್ರೀಡಾ ವಿಭಾಗಗಳಲ್ಲಿ ಬೆಳೆಯುತ್ತಿರುವ ಸ್ಪರ್ಧಾತ್ಮಕ ಸಾಮರ್ಥ್ಯವನ್ನು ಸಾಬೀತುಪಡಿಸಿತು. ಈ ಕ್ರೀಡಾಕೂಟದಲ್ಲಿ ಭಾರತ, ಹಲವು ಗಮನಾರ್ಹ ಸಾಧನೆಗಳನ್ನು ಮಾಡಿದೆ. ಇದರಲ್ಲಿ ರಿಕರ್ವ್ ಆರ್ಚರಿಯಲ್ಲಿನ ಐತಿಹಾಸಿಕ ಪ್ರದರ್ಶನಗಳು, ಒಂದೇ ಆವೃತ್ತಿಯಲ್ಲಿ, ಪುರುಷರ ಮತ್ತು ಮಹಿಳೆಯರ ಹಾಕಿ ತಂಡಗಳು ಚಿನ್ನದ ಪದಕ ಗೆದ್ದಿರುವುದು ಹಾಗೂ ಸಾಫ್ಟ್ ಟೆನ್ನಿಸ್ ಮತ್ತು ಮಿಕ್ಸೆಡ್ ಮಾರ್ಷಲ್ ಆರ್ಟ್ಸ್‌ನಲ್ಲಿ ಚೊಚ್ಚಲ ಪದಕಗಳನ್ನು ಪಡೆದಿರುವುದು ಸೇರಿವೆ. ಮಹಿಳೆಯರ ಟ್ರ್ಯಾಪ್ ಸ್ಪರ್ಧೆಯಲ್ಲಿ

ಭಾರತದ ಮೊದಲ ಚಿನ್ನದ ಪದಕ, ೨೮ ವರ್ಷಗಳ ನಂತರ, ವೇಟ್‌ಲಿಫ್ಟಿಂಗ್‌ನಲ್ಲಿ ಬೆಳ್ಳಿ ಪದಕ ಮತ್ತು ಗ್ರೆಕೊ-ರೋಮನ್ ಕುಸ್ತಿಯಲ್ಲಿ ಬೆಳ್ಳಿ ಪದಕ ಮುಂತಾದವು ಇತರ ಪ್ರಮುಖ ಸಾಧನೆಗಳಾಗಿವೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು, ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಲಡಾಖ್‌ನಲ್ಲಿ ಸುಮಾರು ೩ ಸಾವಿರದ ೩೫೦ ಕೋಟಿ ರೂಪಾಯಿ ಮೌಲ್ಯದ ಐದು ಪ್ರಮುಖ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಈ ಯೋಜನೆಗಳು, ಸಂಪರ್ಕ ವ್ಯವಸ್ಥೆಯನ್ನು ಬಲಪಡಿಸುವ, ಇಂಧನ ಮೂಲಸೌಕರ್ಯವನ್ನು ಸುಧಾರಿಸುವ, ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸುವ ಮತ್ತು ಈ ಪ್ರದೇಶದಲ್ಲಿ ನೀರಿನ ಭದ್ರತೆಯನ್ನು ಹೆಚ್ಚಿಸುವ ಗುರಿ ಹೊಂದಿವೆ. ಈ ಸಂದರ್ಭದಲ್ಲಿ ಪ್ರಧಾನಿ, ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಲೇಹ್‌ನ ಕುಶೋಕ್ ಬಕುಲಾ ರಿಂಪೋಚೆ ವಿಮಾನ ನಿಲ್ದಾಣದಲ್ಲಿ, ೭೪೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಹೊಸ ಪ್ರಯಾಣಿಕರ ಟರ್ಮಿನಲ್ ಕಟ್ಟಡವನ್ನು ಪ್ರಧಾನಿ ಉದ್ಘಾಟಿಸಲಿದ್ದಾರೆ. ಗಡಿ ರಸ್ತೆಗಳ ಸಂಸ್ಥೆ ನಿರ್ಮಿಸಿರುವ ೨೯೮ ಕಿಲೋಮೀಟರ್ ಉದ್ದದ ನಿಮ್ಮು-ಪದಮ್-ದಾರ್ಚಾ ರಸ್ತೆಯನ್ನು ಪ್ರಧಾನಿ ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ೯ ಮೆಗಾವ್ಯಾಟ್ ಸಾಮರ್ಥ್ಯದ, ಹನು ಸಣ್ಣ ಜಲವಿದ್ಯುತ್ ಯೋಜನೆ ಮತ್ತು ೭೭ ಕಿಲೋವ್ಯಾಟ್‌ನ, ಡಬಲ್-ಸರ್ಕ್ಯೂಟ್ ದಾಹ್-ಹನು-ಖಾಲ್ತ್ಸಿ ಪ್ರಸರಣ ಮಾರ್ಗವನ್ನೂ ಅವರು ಉದ್ಘಾಟಿಸಲಿದ್ದಾರೆ. ಲೇಹ್‌ನ ಸಿಂಧು ಘಾಟ್‌ನಲ್ಲಿ ಭಾರತದ ಮೊದಲ 'ಪೆಟ್ರೋಗ್ಲಿಫ್ ಸಂರಕ್ಷಣಾ ಉದ್ಯಾನವನ'ವನ್ನು ಹಾಗೂ 'ಪ್ರಾಜೆಕ್ಟ್ ಹಿಮ್ ಸರೋವರ್' ಅಡಿಯಲ್ಲಿ ೪೦ ಹಳ್ಳಿಗಳಲ್ಲಿ ಅಭಿವೃದ್ಧಿಪಡಿಸಲಾದ ೪೦ ಜಲಮೂಲಗಳನ್ನು ಪ್ರಧಾನಿ ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯು, ೧೧ ಲಕ್ಷದ ೪೦ ಸಾವಿರಕ್ಕೂ ಹೆಚ್ಚು ರೈಲ್ವೆ ನೌಕರರಿಗೆ ೭೮ ದಿನಗಳ ವೇತನಕ್ಕೆ ಸಮಾನವಾದ ಉತ್ಪಾದಕತೆ ಆಧಾರಿತ ಬೋನಸ್ - ಪಿಎಲ್‌ಬಿ ಅನ್ನು ನೀಡಲು ಅನುಮೋದನೆ ನೀಡಿದೆ. ಸಚಿವ ಸಂಪುಟ ಸಭೆಯ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಈ ಪಾವತಿಗಾಗಿ ಸರ್ಕಾರ ೨ ಸಾವಿರದ ೯ ಕೋಟಿ ರೂಪಾಯಿಗೂ ಹೆಚ್ಚು ಹಣವನ್ನು ಮೀಸಲಿಟ್ಟಿದೆ. ಅರ್ಹ ನೌಕರರೊಬ್ಬರಿಗೆ ಗರಿಷ್ಠ ೧೭ ಸಾವಿರದ ೯೫೧

ರೂಪಾಯಿಗಳಷ್ಟು ಬೋನಸ್ ಮೊತ್ತ ಸಿಗಲಿದೆ ಎಂದರು. ಇದರಲ್ಲಿ ಟ್ರ್ಯಾಕ್ ನಿರ್ವಹಣೆ ಮಾಡುವವರು, ಲೋಕೋ ಪೈಲಟ್‌ಗಳು, ರೈಲು ವ್ಯವಸ್ಥಾಪಕರು, ಸ್ಟೇಷನ್ ಮಾಸ್ಟರ್‌ಗಳು, ಮೇಲ್ವಿಚಾರಕರು, ತಂತ್ರಜ್ಞರು, ಪಾಯಿಂಟ್ಸ್‌ಮೆನ್ ಮತ್ತು ಕಚೇರಿ ಸಿಬ್ಬಂದಿ ಸೇರಿದಂತೆ 'ಗ್ರೂಪ್ ಸಿ' ವರ್ಗದ ರೈಲ್ವೆ ನೌಕರರು ಸೇರಿದ್ದಾರೆ. ಅಲ್ಲದೆ, ೨೦೨೬-೨೭ ರಿಂದ ೨೦೩೦-೩೧ ರವರೆಗಿನ ಅವಧಿಗೆ ರಾಷ್ಟ್ರೀಯ ಸಾಮಾಜಿಕ ನೆರವು ಕಾರ್ಯಕ್ರಮ - ಎನ್‌ಎಸ್‌ಎಪಿ ಯನ್ನು ಮುಂದುವರಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಇದಕ್ಕಾಗಿ ಒಟ್ಟು ೫೩ ಸಾವಿರದ ೪೨೮ ಕೋಟಿ ರೂಪಾಯಿಗಳ ಬಜೆಟ್ ಅನ್ನು ನಿಗದಿಪಡಿಸಲಾಗಿದೆ. ಈ ಯೋಜನೆ ಇನ್ನು ಮುಂದೆ ಪ್ರಧಾನ ಮಂತ್ರಿ ಸಾಮಾಜಿಕ ಸಹಾಯತಾ ಯೋಜನೆ ಎಂದು ಮರುನಾಮಕರಣ ಗೊಳ್ಳಲಿದೆ. ಈ ಸಾಮಾಜಿಕ ಭದ್ರತಾ ವಿಸ್ತರಣೆಯ ಮೂಲಕ ದೇಶದ ಎಲ್ಲಾ ೩೬ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿರುವ ಒಟ್ಟು ೩.೨೦ ಕೋಟಿ ಫಲಾನುಭವಿಗಳಿಗೆ ಅನುಕೂಲವಾಗಲಿದೆ. ಆರ್ಥಿಕ ವ್ಯವಹಾರಗಳ ಸಚಿವ ಸಂಪುಟ ಸಮಿತಿಯು ಐಡಿಬಿಐ ಬ್ಯಾಂಕ್‌ನ ಕಾರ್ಯತಂತ್ರದ ಪುನಾರ್ರಚನೆಗೆ ಅನುಮೋದನೆ ನೀಡಿದೆ. ಇದರ ಅನ್ವಯ, ಐಡಿಬಿಐ ಬ್ಯಾಂಕ್‌ನಲ್ಲಿರುವ ಶೇಕಡಾ ೬೦.೭೨ ರಷ್ಟು ಷೇರುಗಳನ್ನು ಕಾರ್ಯತಂತ್ರದ ಖರೀದಿದಾರರಿಗೆ ಮಾರಾಟ ಮಾಡಲು ನಿರ್ಧರಿಸಲಾಗಿದೆ. ಕೆನಡಾ ಮೂಲದ ಫೇರ್‌ಫ್ಯಾಕ್ಸ್ ಫೈನಾನ್ಷಿಯಲ್ ಹೋಲ್ಡಿಂಗ್ಸ್ ಲಿಮಿಟೆಡ್ ಸಂಸ್ಥೆಯನ್ನು ಈ ಖರೀದಿದಾರರನ್ನಾಗಿ ಆಯ್ಕೆ ಮಾಡಲಾಗಿದೆ. ಫೇರ್‌ಫ್ಯಾಕ್ಸ್ ಸಂಸ್ಥೆಯು ಒಟ್ಟು ೫೨ ಸಾವಿರದ ೮೭೮ ಕೋಟಿ ರೂಪಾಯಿಗೂ ಹೆಚ್ಚಿನ ಮೊತ್ತಕ್ಕೆ ಬ್ಯಾಂಕ್‌ನ ಶೇಕಡಾ ೬೦.೭೨ ರಷ್ಟು ಷೇರುಗಳನ್ನು ಖರೀದಿಸಲಿದ್ದು, ಇದರೊಂದಿಗೆ ಬ್ಯಾಂಕ್‌ನ ನಿಯಂತ್ರಣವನ್ನು ತನ್ನ ಕೈಗೆ ತೆಗೆದುಕೊಳ್ಳಲಿದೆ.

<><><><>

ದೇಶದಲ್ಲಿ ಕಬ್ಬು ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಶೀಲಿಸಲು ಮತ್ತು ಅವರ ಆತಂಕಗಳನ್ನು ನಿವಾರಿಸಲು ಸೂಕ್ತ ಕ್ರಮಗಳನ್ನು ಶಿಫಾರಸು ಮಾಡಲು ಕೇಂದ್ರ ಸರ್ಕಾರ ಸಮಿತಿಯೊಂದನ್ನು ರಚಿಸಿದೆ. ನೀತಿ ಆಯೋಗದ ಮಾಜಿ ಸದಸ್ಯ ಪ್ರೊಫೆಸರ್ ರಮೇಶ್ ಚಂದ್ ಈ ಸಮಿತಿಯ ಅಧ್ಯಕ್ಷತೆ ವಹಿಸಲಿದ್ದು, ಕೃಷಿ ಆಯುಕ್ತರು, ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಜಂಟಿ ಕಾರ್ಯದರ್ಶಿ ಹಾಗೂ ಗ್ರಾಹಕ ವ್ಯವಹಾರಗಳ ಇಲಾಖೆಯ ಜಂಟಿ ಕಾರ್ಯದರ್ಶಿ ಸದಸ್ಯರಾಗಿರುತ್ತಾರೆ. ಕರ್ನಾಟಕ ಮತ್ತು ಮಹಾರಾಷ್ಟ್ರದ ಕಬ್ಬು ಬೆಳೆಗಾರರ ಪ್ರತಿನಿಧಿಗಳು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವರು ಹಾಗೂ ಕೇಂದ್ರ ಗ್ರಾಹಕ

ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವರೊಂದಿಗೆ ನಡೆಸಿದ ಸಭೆಯಲ್ಲಿ ಕೈಗೊಂಡ ನಿರ್ಧಾರಗಳ ಹಿನ್ನೆಲೆಯಲ್ಲಿ ಈ ಸಮಿತಿಯನ್ನು ರಚಿಸಲಾಗಿದೆ. ರೈತರ ಪ್ರತಿನಿಧಿಗಳು, ಸಕ್ಕರೆ ಕಾರ್ಖಾನೆಗಳ ಸಂಘಗಳು, ರಾಜ್ಯ ಸರ್ಕಾರಗಳು ಮತ್ತು ಇತರ ತಜ್ಞರು ಸೇರಿದಂತೆ ಎಲ್ಲಾ ಪಾಲುದಾರರೊಂದಿಗೆ ಸಮಿತಿಯು ಸಮಾಲೋಚನೆ ನಡೆಸಲಿದೆ ಎಂದು ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯ ತಿಳಿಸಿದೆ.

<><><><>

’ಜನ ಸೇವೆಯಿಂದ ದೇಶ ಸೇವೆ’ ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ ’ವಿಕಸಿತ ಭಾರತ’ ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ’ಆಯುಷ್ಮಾನ್ ಭಾರತ್ ಪಿಎಂ-ಜೆಎವೈ’ ಕುರಿತ ಒಂದು ವರದಿ ಇಲ್ಲಿದೆ. ಬಡ ಮತ್ತು ನಿರ್ಗತಿಕ ಕುಟುಂಬಗಳಿಗೆ ವರ್ಷಕ್ಕೆ ೫ ಲಕ್ಷದವರೆಗೆ ನಗದುರಹಿತ ಆರೋಗ್ಯ ವಿಮೆಯನ್ನು ಒದಗಿಸುವ ಉದ್ದೇಶದಿಂದ ೨೦೧೮ ರಲ್ಲಿ ಪ್ರಾರಂಭವಾದ ಆಯುಷ್ಮಾನ್ ಭಾರತ್-ಪಿಎಂ-ಜೆಎವೈ ಯೋಜನೆಯು ಬಡತನ ಮತ್ತು ಆರೋಗ್ಯ ಸೇವೆಯ ನಡುವಿನ ಸಂಬಂಧವನ್ನೇ ಬದಲಾಯಿಸಿದೆ. ಪ್ರತಿ ಕುಟುಂಬಕ್ಕೆ ವಾರ್ಷಿಕ ೫ ಲಕ್ಷದವರೆಗಿನ ನಗದು ರಹಿತ ಚಿಕಿತ್ಸಾ ರಕ್ಷಣೆಯನ್ನು ಒದಗಿಸುವ ಈ ಯೋಜನೆಯು, ಭಾರತದ ಶೇಕಡ ೪೦ರಷ್ಟು ಅತ್ಯಂತ ಬಡ ಜನಸಂಖ್ಯೆಯನ್ನು ಗುರಿಯಾಗಿಸಿಕೊಂಡಿದೆ. ಕ್ರಮೇಣ ತನ್ನ ವ್ಯಾಪ್ತಿಯನ್ನು ವಿಸ್ತರಿಸಿಕೊಂಡಿದೆ. ಜೂನ್ ೨೦೨೬ ರ ವೇಳೆಗೆ, ಇದು ೩೭ ಸಾವಿರದ ೪೧೩ ಸಾರ್ವಜನಿಕ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ೧ ಲಕ್ಷದ ೯೨ ಕೋಟಿ ಮೌಲ್ಯದ ೧೨ ಕೋಟಿ ೬೯ ಲಕ್ಷ ಆಸ್ಪತ್ರೆ ದಾಖಲಾತಿಗಳಿಗೆ ಅನುವು ಮಾಡಿಕೊಟ್ಟಿದೆ. ಇದರ ಪ್ರಭಾವವು ಮಹಿಳೆಯರ ವಿಷಯದಲ್ಲಿ ವಿಶೇಷವಾಗಿ ಗಮನಾರ್ಹವಾಗಿದೆ. ಒಟ್ಟು ಆಯುಷ್ಮಾನ್ ಕಾರ್ಡ್‌ಗಳಲ್ಲಿ ಸುಮಾರು ಶೇಕಡಾ ೪೯ರಷ್ಟು ಮತ್ತು ಅಧಿಕೃತ ಆಸ್ಪತ್ರೆ ದಾಖಲಾತಿಗಳಲ್ಲಿ ಸುಮಾರು ಶೇಕಡಾ ೪೮ರಷ್ಟು ಮಹಿಳೆಯರೇ ಇದ್ದಾರೆ. ಸಾಮಾಜಿಕ-ಆರ್ಥಿಕ ಸ್ಥಿತಿಯನ್ನು ಲೆಕ್ಕಿಸದೆ, ೭೦ ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಹಿರಿಯ ನಾಗರಿಕರನ್ನು ಒಳಗೊಳ್ಳುವಂತೆ ಈ ಯೋಜನೆಯನ್ನು ಮತ್ತಷ್ಟು ವಿಸ್ತರಿಸಲಾಗಿದೆ. ಆಯುಷ್ಮಾನ್ ವಯ ವಂದನಾ ಕಾರ್ಡ್ ಆದಾಯದ ಮಿತಿಯಿಲ್ಲದೆ ೬ ಕೋಟಿ ಹಿರಿಯ ನಾಗರಿಕರಿಗೆ ವಿಸ್ತರಿಸಲ್ಪಟ್ಟಿದೆ - ಇದು

ಭಾರತದ ಹಿರಿಯ ನಾಗರಿಕರಿಗೆ ಆರೋಗ್ಯ ರಕ್ಷಣೆಯ ಭರವಸೆಯನ್ನು ಒದಗಿಸುತ್ತದೆ. ಎಬಿ-ಪಿಎಂಜೆಎವೈ ಯೋಜನೆಯು ಆರೋಗ್ಯ ಸೇವೆಯನ್ನು ಅಗತ್ಯವಿಲ್ಲದಿದ್ದರೆ ಬಿಟ್ಟುಬಿಡಬಹುದಾದ ವಿಷಯ ಎಂದು ಪರಿಗಣಿಸುವ ಮನಸ್ಥಿತಿಯನ್ನು ಬದಲಾಯಿಸುತ್ತಿದೆ. ಬದಲಾಗಿ, ಗುಣಮಟ್ಟದ ಆರೋಗ್ಯ ಸೇವೆಯನ್ನು ಆರೋಗ್ಯಕರ ಜೀವನದ ಸುಲಭವಾಗಿ ಲಭ್ಯವಿರುವ ಅಡಿಪಾಯವನ್ನಾಗಿ ನೋಡುವಂತೆ ಮಾಡುತ್ತಿದೆ.

<><><><>

ಹೈದರಾಬಾದ್‌ನಲ್ಲಿ ನಿನ್ನೆ ರಾತ್ರಿ ನಡೆದ ನಾಲ್ಕನೇ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯದಲ್ಲಿ, ವೆಸ್ಟ್ ಇಂಡೀಸ್ ತಂಡ, ಭಾರತ ತಂಡವನ್ನು ೨೪ ರನ್‌ಗಳಿಂದ ಸೋಲಿಸಿದೆ. ವೆಸ್ಟ್ ಇಂಡೀಸ್ ಒಡ್ಡಿದ ೨೪೮ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಭಾರತ, ೧೯.೩ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ಕೇವಲ ೨೨೩ ರನ್ ಗಳಿಸಲಷ್ಟೇ ಸಾಧ್ಯವಾಗಿ ಸೋಲೊಪ್ಪಿತು. ಐದು ಪಂದ್ಯಗಳ ಈ ಸರಣಿಯು ಈಗ ೨-೨ ಸಮಬಲದಲ್ಲಿದೆ. ಸರಣಿಯ ಅಂತಿಮ ಪಂದ್ಯ, ಈ ತಿಂಗಳ ೧೭ ರಂದು ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>